ಶ್ರೀ ಪಿ. ಜೆ. ಆರ್. ಸಿಂಧ್ಯ (ಸಾರಿಗೆ ಮತ್ತು ವಸತಿ ರಾಜ್ಯ ಸಚಿವರು).—"೧೯೮೫ರ ಕರ್ನಾಟಕ ಮೋಟಾರು ವಾಹನ ತೆರಿಗೆ (ತಿದ್ದುಪಡಿ) ವಿಧೇಯಕವನ್ನು" ತಿದ್ದುಪಡಿ ಮಾಡಿರುವಂತೆ ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ "೧೯೮೫ರ ಕರ್ನಾಟಕ ಮೋಟಾರು ವಾಹನ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು).

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಂಸೂದೆಗೆ ಒಪ್ಪಿಗೆ ನೀಡಲಾಯಿತು

೧೯೮೫ರ ಕರ್ನಾಟಕ ಕೃಷಿ ಆದಾಯ ತೆರಿಗೆ (ತಿದ್ದುಪಡಿ) ವಿಧೇಯಕ

ಪರ್ಯಾಲೋಚನಾ ಪ್ರಸ್ತಾಪ

ಶ್ರೀ ಎ. ಲಕ್ಷ್ಮೀಸಾಗರ್ (ನಗರಾಭಿವೃದ್ಧಿ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—ಮಾನ್ಯ ಅಧ್ಯಕ್ಷರೇ, ೧೯೮೫ರ ಕೃಷಿ ಆದಾಯ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

೬–೩೦ ಪಿ. ಎಂ.

ಪ್ರಸ್ತಾವವನ್ನು ಪರಿಂಡಿಸಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್.—ಮಾನ್ಯ ಅಧ್ಯಕ್ಷರೇ, ಈ ತಿದ್ದುಪಡಿಯಿಂದ ಆದಾಯದಲ್ಲಿ ಸುಮಾರು ೧.೫ ಕೋಟಿ ಹಣ ಕಡಿಮೆಯಾಗಿ ಬರುತ್ತದೆ. ಸಚಿವ ಸಂಪುಟದ ಒಂದು ಸಣ್ಣ ಸಭೆಯನ್ನು ಮಾನ್ಯ ಶ್ರೀ ಜೇವಿಜಯ ಅವರ ಅಧ್ಯಕ್ಷತೆಯಲ್ಲಿ ನೇಮಕ ಮಾಡಲಾಯಿತು. ಅವರು ಮಂಡಿಸಿದ ವರದಿಯ ಆಧಾರದ ಮೇಲೆ ಈ ತಿದ್ದುಪಡಿಯನ್ನು ಇದರಲ್ಲಿ ಅಳವಡಿಸಲಾಗಿದೆ. ಅವರು ತಮ್ಮ ವರದಿಯಲ್ಲಿ ಸೂಚಿಸಿದ ಶಿಫಾರಸ್ಸುಗಳಲ್ಲಿ ಶೇಕಡಾ ೮೦ರಷ್ಟನ್ನು ಈ ತಿದ್ದುಪಡಿಯಲ್ಲಿ ಸೇರಿಸಿಕೊಂಡಿದ್ದೇವೆ. ರೈತರಿಗೆ ಸಹಾಯ ಮಾಡುವುದಕ್ಕೋಸ್ಕರ ತೀರ್ಮಾನ ತೆಗೆದುಕೊಂಡು ಈ ತಿದ್ದುಪಡಿಯನ್ನು ತಂದಿದ್ದೇವೆ. ಇದಕ್ಕೆ ಸಭೆಯ ಒಪ್ಪಿಗೆ ಕೊಡಬೇಕೆಂದು ಮನವಿ ಮಾಡಿಕೊಳ್ಳುತ್ತೇನೆ. We used to get about Rs. 12 crores. It is including coffee.

SRI M. VEERAPPA MOILY.—But, you are getting Rs. 10 crores if this amendment is agreed to, is it not so ?

SRI A. LAKSHMI SAGAR.—Yes sir.

MR. SPEAKER.—Now I put the Bill to vote.

ಪ್ರಸ್ತಾವ ಏನೆಂದರೆ "೧೯೮೫ನೇ ಇಸವಿಯ ಕರ್ನಾಟಕ ಕೃಷಿ ಆದಾಯ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ ೨ರಿಂದ ೧೧ರವರೆಗೆ

ಅಧ್ಯಕ್ಷರು.—"ಖಂಡ ೨ರಿಂದ ೧೧ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(೨ರಿಂದ ೧೧ರವರೆಗೆ ಎರಡೂ ಸೇರಿದಂತೆ ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ ೧ ಇತ್ಯಾದಿ

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ, "ಮೊದಲನೇ ಖಂಡ, ದೀರ್ಘ ಶೀರ್ಷಿಕೆ (ಅವತರಣಿಕೆಗಳು) ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವವನ್ನು ಅಂಗೀಕರಿಸಲಾಯಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು.)

ಪ್ರಸ್ತಾವದ ಅಂಗೀಕಾರ

ಶ್ರೀ ಎ. ಲಕ್ಷ್ಮೀಸಾಗರ್ (ನಗರಾಭಿವೃದ್ಧಿ ಕಾನೂನು ಮಂತ್ರಿಗಳು).—ಸನ್ಮಾನ್ಯ ಅಧ್ಯಕ್ಷರೆ, ೧೯೮೫ನೇ ಇಸವಿಯ ಕರ್ನಾಟಕ ಕೃಷಿ ಆದಾಯ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ನಾನು ಮನವಿ ಮಾಡಿಕೊಳ್ಳುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ, '೧೯೮೫ನೇ ಇಸವಿಯ ಕರ್ನಾಟಕ ಕೃಷಿ ಆದಾಯ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಂಸೂದೆಗೆ ಒಪ್ಪಿಗೆ ನೀಡಲಾಯಿತು.

PRESENTATION OF REPORT

SRI J. A. FERNANDES.—Sir, I present the Second Report of the Committee on Private Members' Bills and Resolutions.

SRI R. RAMAJAH.—Sir, I Move :

"That the House agrees with the Second Report of the Committee on Private Members' Bills and resolutions"

MR. SPEAKER.—The report presented and agreed to by the House.

ಮಂತ್ರಿಯವರ ಹೇಳಿಕೆ

ಮೈಸೂರು ನಗರದಲ್ಲಿ ಶ್ರೀಮತಿ ವಿಜಯಲಕ್ಷ್ಮಿ ಎನ್ನುವ ಹೆಣ್ಣು ಮಗಳಿಗೆ ಗಂಡ ಮತ್ತು ಅತ್ತೆ ಇಬ್ಬರೂ ಸೇರಿಕೊಂಡು ಕಿರುಕುಳ ಕೊಟ್ಟಿರುವ ಬಗ್ಗೆ

ಶ್ರೀ ಬಿ. ರಾಚಯ್ಯ (ಗೃಹಮಂತ್ರಿಗಳು).—ಮಾನ್ಯ ಅಧ್ಯಕ್ಷರೆ, ನಿನ್ನೆಯ ದಿವಸ ಮಾನ್ಯ ಭೂಪತಿಯವರು ಕೊಟ್ಟಿರುವ ಸೂಚನೆಗೆ ಹೇಳಿಕೆ ಈ ರೀತಿ ಇದೆ :

"ನಾರಾಯಣಸ್ವಾಮಿ ಅವರ ಪತ್ನಿ ಶ್ರೀಮತಿ ವಿಜಯಲಕ್ಷ್ಮಿ ಎಂಬುವರು ದಿನಾಂಕ ೩೦-೭-೧೯೫೫ರಂದು ಮಧ್ಯಾಹ್ನ ೧೨-೩೦, ೧-೦೦ ಗಂಟೆ ಸುಮಾರಿಗೆ ಟೀ ಮಾಡಲು ಹೋಗಿ ಬೆಂಕಿ ಹಚ್ಚಿಕೊಂಡರೆಂದೂ ಆಕೆಯನ್ನು ಕಾಪಾಡಲು ಹೋಗಿ ಆಕೆಯ ಪತಿ ಕೈ ಸುಟ್ಟುಕೊಂಡರೆಂದೂ, ನಂತರ ೧-೨೦ ಗಂಟೆಯ ವೇಳೆಗೆ ಆಕೆಯನ್ನು ಕೆ. ಆರ್. ಆಸ್ಪತ್ರೆಗೆ ಚಿಕಿತ್ಸೆಗಾಗಿ ಸೇರಿಸಲಾಯಿತೆಂದೂ ವರದಿಯಾಗಿದೆ. ಸುಮಾರು ೫-೩೦ ಗಂಟೆ ಸುಮಾರಿಗೆ ನಜರಾಬಾದ್ ಪೋಲೀಸ್ ಠಾಣೆಯಲ್ಲಿ ಆಕೆಯ ತಮ್ಮ ಶ್ರೀ ರಾಮಚಂದ್ರ ಎಂಬುವನು ಆಕೆಯ ಸ್ಥಿತಿಗೆ ಆಕೆಯ ಅತ್ತೆ ಮತ್ತು ಆಕೆಯ ಗಂಡನೇ ಕಾರಣವೆಂದು